**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪಂರಾ 83 ಜಿಪಸ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:18-02-2021.

**ಸುತ್ತೋಲೆ**

**ವಿಷಯ:** ಜಿಲ್ಲಾ, ತಾಲ್ಲೂಕು ಹಾಗೂ ಗ್ರಾಮ ಪಂಚಾಯತಿಗಳ ವಿರುದ್ಧ ನ್ಯಾಯಾಲಯಗಳಲ್ಲಿ ಸಲ್ಲಿಸಲಾಗುವ ರಿಟ್ ಅರ್ಜಿ, ದಾವೆ ಹಾಗೂ ಇತ್ಯಾದಿ ಮೊಕದ್ದಮೆಗಳಲ್ಲಿ ಪರವಾಗಿ ವಾದಿಸಲು ನ್ಯಾಯವಾದಿಗಳನ್ನು ನೇಮಿಸಿಕೊಳ್ಳುವ ಕುರಿತು.

**ಉಲ್ಲೇಖ:**
1. ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ/52/ಗ್ರಾಪಂನ್ಯಾ/ 2011, ದಿನಾಂಕ:29-10-2011.
2. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 59 ಜಿಪಸ 2017, ದಿನಾಂಕ:06-04-2017.

********

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 289ರ ಉಪ-ಬಂಧದಲ್ಲಿ ಪಂಚಾಯತ್ ರಾಜ್ ಸಂಸ್ಥೆಗಳ ವಿರುದ್ಧ ಅಧಿನಿಯಮದ ಯಾವುದೇ ಪ್ರಕರಣ, ನಿಯಮ ಅಥವಾ ಆದೇಶದಲ್ಲಿ ಮಾಡಲಾಗಿರುವ ಯಾವುದೇ ಕಾರ್ಯದ ಬಗ್ಗೆ ಪಂಚಾಯತ್ ರಾಜ್ ಸಂಸ್ಥೆಗಳ ವಿರುದ್ಧ ನ್ಯಾಯಾಲಯಗಳಲ್ಲಿ ದಾಖಲಾಗುವ ರಿಟ್ ಅರ್ಜಿ, ದಾವೆ ಹಾಗೂ ಇತ್ಯಾದಿ ಮೊಕದ್ದಮೆಗಳಲ್ಲಿ ಪಂಚಾಯತ್ ರಾಜ್ ಸಂಸ್ಥೆಗಳ ಪರವಾಗಿ ವಾದವನ್ನು ಪ್ರತಿಪಾದಿಸಲು ನ್ಯಾಯವಾದಿಗಳನ್ನು ನೇಮಿಸಿಕೊಳ್ಳಲು ಅವಕಾಶವಿರುತ್ತದೆ. ಈ ರೀತಿ ನೇಮಕಗೊಂಡ ನ್ಯಾಯವಾದಿಗಳು ಸಂಬಂಧಪಟ್ಟ ಪಂಚಾಯತ್ ರಾಜ್ ಸಂಸ್ಥೆಗಳ ವಿರುದ್ಧ ದಾಖಲಾಗಿರುವ ಮೊಕದ್ದಮೆಗಳಲ್ಲಿ ಪ್ರತಿರಕ್ಷಣಾ ಹೇಳಿಕೆಯನ್ನು ಸಿದ್ಧಪಡಿಸಿಕೊಳ್ಳಲು ಹಾಗೂ ವಾದವನ್ನು ಮಂಡಿಲು ಅವಕಾಶವಿರುತ್ತದೆ. ಈ ನ್ಯಾಯವಾದಿಗಳ ಸಂಭಾವನೆಯನ್ನು ಸಂಬಂಧಪಟ್ಟ ಪಂಚಾಯತ್ ರಾಜ್ ಸಂಸ್ಥೆಗಳ ನಿಧಿಯಿಂದ ಪಾವತಿಸಬೇಕಾಗಿದೆ. ಆದುದರಿಂದ, ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾಯತಿ ಹಾಗೂ ಜಿಲ್ಲಾ ಪಂಚಾಯತಿಗಳು ಮೊಕದ್ದಮೆ ವಿಷಯಕ್ಕೆ ಸಂಬಂಧಿಸಿದಂತೆ ಪರಿಣಿತ ನ್ಯಾಯವಾದಿಗಳನ್ನು ಸ್ವತಂತ್ರವಾಗಿ ನೇಮಿಸಿಕೊಳ್ಳಲು ಅವಕಾಶವಿರುತ್ತದೆ.

ಮೇಲ್ಕಂಡ ಕಾರಣಗಳ ಹಿನ್ನೆಲೆಯಲ್ಲಿ ಉಲ್ಲೇಖ(2)ರಲ್ಲಿ ಹೊರಡಿಸಿರುವ ಸರ್ಕಾರದ ಸುತ್ತೋಲೆಯನ್ನು ಹಿಂಪಡೆದುಕೊಳ್ಳಲಾಗಿದೆ. ಮುಂದುವರೆದು, ಗ್ರಾಮ, ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯತಿಗಳಿಗೆ ಸಂಬಂಧಿಸಿದಂತೆ ನ್ಯಾಯವಾದಿಗಳನ್ನು ಆಯ್ಕೆ ಮಾಡಿಕೊಳ್ಳುವುದು ಹಾಗೂ ನ್ಯಾಯವಾದಿಗಳ ಸಂಭಾವನೆಯನ್ನು ಸಂಬಂಧಿಸಿದ ಪಂಚಾಯತ್ ರಾಜ್ ಸಂಸ್ಥೆಗಳ ನಿಧಿಯಿಂದ ಪಾವತಿಸುವಂತೆ ಹಾಗೂ ನೇಮಕಾತಿಗೆ

ಸಂಬಂಧಿಸಿದಂತೆ ಉಲ್ಲೇಖ(1)ರ ಸುತ್ತೋಲೆಯಲ್ಲಿ ವಿಧಿಸಿರುವ ಈ ಕೆಳಕಂಡ ಷರತ್ತುಗಳನ್ನು ಪಾಲಿಸುವಂತೆ ಸೂಚಿಸಲಾಗಿದೆ.

1. ಜಿಲ್ಲಾ ಪಂಚಾಯತಿ, ತಾಲ್ಲೂಕು ಪಂಚಾಯತಿ ಹಾಗೂ ಗ್ರಾಮ ಪಂಚಾಯತಿಗಳ ವಿರುದ್ಧ ದಾವೆಗಳಿಗೆ ಸಂಬಂಧಿಸಿದಂತೆ ನುರಿತ ವಕೀಲರನ್ನು ನೇಮಿಸಿಕೊಳ್ಳುವುದು.
2. ಜಿಲ್ಲಾ ಪಂಚಾಯತಿ ಹಂತದಲ್ಲಿ ನುರಿತ ವಕೀಲರ ತಂಡವನ್ನು ಪಾರದರ್ಶಕವಾಗಿ ರಚಿಸಬೇಕು.
3. ವಕೀಲರಿಗೆ ಪ್ರತಿ ಪ್ರಕರಣಕ್ಕೆ ನೀಡಬೇಕಾದ ಗೌರವಧನದ ಬಗ್ಗೆ ಕಾಲಕಾಲಕ್ಕೆ ಕಾನೂನು ಇಲಾಖೆ ಹೊರಡಿಸುವ ದರದಂತೆ ಪಾವತಿಸುವುದು.
4. ಕಾನೂನು ಹಾಗೂ ನ್ಯಾಯಾಲಯ ಪ್ರಕರಣಗಳ ಬಗ್ಗೆ ಅಧಿಕಾರಿಗಳಿಗೆ ಅರಿವು ಮೂಡಿಸಲು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಕಾನೂನು ತಜ್ಞರಿಂದ ಸಮಾವೇಶ/ಉಪನ್ಯಾಸ/ತರಬೇತಿ ಕಾರ್ಯಾಗಾರಗಳನ್ನು ಕಾಲಕಾಲಕ್ಕೆ ಹಮ್ಮಿಕೊಳ್ಳುವುದು.
5. ನ್ಯಾಯಾಲಯದಲ್ಲಿ ದಾವೆಗಳನ್ನು ಹೂಡಿದಾಗ ಕೂಡಲೆ ಗ್ರಾಮ ಪಂಚಾಯತಿಗಳು, ತಾಲ್ಲೂಕು ಪಂಚಾಯತಿಗಳು ಹಾಗೂ ಜಿಲ್ಲಾ ಪಂಚಾಯತಿ ಅಧಿಕಾರಿಗಳು (ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು) ಕಂಡಿಕೆವಾರು ಉತ್ತರಗಳನ್ನು ತಯಾರಿಸಿ ವಕೀಲರ ಮುಖಾಂತರ ಕಾಲಮಿತಿಯಲ್ಲಿ ಸಲ್ಲಿಸಬೇಕು.
6. ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯಿತಿ ದಾವೆ ಪ್ರಕರಣಗಳಿಗೆ ಸಂಬಂಧಿಸಿದಂತೆ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಕಾರ್ಯನಿರ್ವಾಹಕ ಅಧಿಕಾರಿಗಳು, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಅನುಕ್ರಮವಾಗಿ ಜವಾಬ್ದಾರರಾಗಿರುತ್ತಾರೆ.
7. ಗ್ರಾಮ ಪಂಚಾಯತಿ ದಾವೆ ಪ್ರಕರಣಗಳಿಗೆ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು ವಿವಿಧ ಇಲಾಖೆಗಳ ಜೊತೆಯಲ್ಲಿ ಸಮನ್ವಯ ಸಾಧಿಸಿ ನ್ಯಾಯಾಲಯದ ಆದೇಶವನ್ನು ಕಾಲಮಿತಿಯಲ್ಲಿ ಅನುಷ್ಠಾನಗೊಳಿಸುವುದು.
8. ತಾಲ್ಲೂಕು ಪಂಚಾಯತಿ ದಾವೆ ಪ್ರಕರಣಗಳಿಗೆ ಸಂಬಂಧಿಸಿದಂತೆ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜವಾಬ್ದಾರರಾಗಿರುತ್ತಾರೆ. ಈ ಅಧಿಕಾರಿಗಳು ವಿವಿಧ ಇಲಾಖೆಗಳ ಜೊತೆಯಲ್ಲಿ ಸಮನ್ವಯ ಸಾಧಿಸಿ ನ್ಯಾಯಾಲಯದ ಆದೇಶವನ್ನು ಕಾಲಮಿತಿಯಲ್ಲಿ ಅನುಷ್ಠಾನಗೊಳಿಸುವುದು.
9. ಜಿಲ್ಲಾ ಪಂಚಾಯತಿ ದಾವೆ ಪ್ರಕರಣಗಳಿಗೆ ಸಂಬಂಧಿಸಿದಂತೆ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಸಂಬಂಧಪಟ್ಟ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಜವಾಬ್ದಾರರಾಗಿರುತ್ತಾರೆ. ಈ ಅಧಿಕಾರಿಗಳು ವಿವಿಧ ಇಲಾಖೆಗಳ ಜೊತೆಯಲ್ಲಿ ಸಮನ್ವಯ ಸಾಧಿಸಿ ನ್ಯಾಯಾಲಯದ ಆದೇಶವನ್ನು ಕಾಲಮಿತಿಯಲ್ಲಿ ಅನುಷ್ಠಾನಗೊಳಿಸುವುದು.
10. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಪ್ರತಿ ನಿತ್ಯ ಮಾನ್ಯ ಸರ್ವೋಚ್ಚ ನ್ಯಾಯಾಲಯ, ಮಾನ್ಯ ಉಚ್ಚ

ನ್ಯಾಯಾಲಯ ಹಾಗೂ ಕೆಳ ಹಂತದ ನ್ಯಾಯಾಲಯಗಳ ವೆಬ್‌ಸೈಟ್‌ಗಳನ್ನು ಪರಿಶೀಲಿಸಿ ಅದೇ ದಿನ ಉತ್ತರಗಳನ್ನು ವಕೀಲರ ಮುಖಾಂತರ ನ್ಯಾಯಾಲಯಕ್ಕೆ ಒದಗಿಸಲು ಕ್ರಮ ತೆಗೆದುಕೊಳ್ಳತಕ್ಕದ್ದು.

11. ಈ ರೀತಿ ಕ್ರಮ ತೆಗೆದುಕೊಳ್ಳದೆ ಸರ್ಕಾರಕ್ಕೆ ಮಾರ್ಗದರ್ಶನಕ್ಕೆ ಸ್ಪಷ್ಟೀಕರಣಕ್ಕೆ ಪತ್ರ ವ್ಯವಹಾರ ಮಾಡುವುದು ಹಾಗೂ ಅಂತಿಮ ಹಂತದಲ್ಲಿ ಸರ್ಕಾರಕ್ಕೆ ನ್ಯಾಯಾಂಗ ನಿಂದನೆಯಂತಹ ಮುಜುಗರಕ್ಕೆ ಸಿಲುಕಿಸದಂತೆ ಕಟ್ಟುನಿಟ್ಟಿನ ಎಲ್ಲಾ ಅಗತ್ಯ ಕ್ರಮಗಳನ್ನು ಸಮಯೋಚಿತವಾಗಿ ಹಾಗೂ ನ್ಯಾಯೋಚಿತವಾಗಿ ನಿಯಮಾನುಸಾರ ಕೈಗೊಳ್ಳುವುದು.

12. ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ನ್ಯಾಯಾಲಯದ ಆದೇಶವನ್ನು ಪಾಲಿಸಲು ವಿಫಲವಾದಲ್ಲಿ ಅಥವಾ ವಿಳಂಬ ಧೋರಣೆ ತಾಳಿದಲ್ಲಿ ಅಂತಹ ಅಧಿಕಾರಿಗಳ ವಿರುದ್ಧ ಕಾನೂನು ರೀತಿ ಕ್ರಮ ಜರುಗಿಸಲಾಗುವುದು.

(ಉಮಾ ಮಹಾದೇವನ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು-ತಮ್ಮ ವ್ಯಾಪ್ತಿಯಲ್ಲಿರುವ ಗ್ರಾಮ ಪಂಚಾಯತಿಗಳಿಗೆ ಸುತ್ತೋಲೆಯ ಪ್ರತಿಯನ್ನು ರವಾನಿಸುವುದು.
3. ಕರ್ನಾಟಕ ವಿಕಾಸ/ವೆಬ್‌ಸೈಟ್.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

ಪ್ರತಿಯನ್ನು:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತಿ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ನಿರ್ದೇಶಕರು (ಪಂ.ರಾಜ್ 1 & 2), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯವರ ಆಪ್ತ ಸಹಾಯಕರು, ಬಹುಮಹಡಿಗಳ ಕಟ್ಟಡ, ಬೆಂಗಳೂರು.